ಕಣಕಣಾನು ನೆನಪೈತ್ರಿ. ಕಾಡು, ಗದ್ದೆ, ಸೀತಾಹೊಳೆ, ಸೇತುವೆ ಮೇಲೆ ಹರಿದಾಡೊ ಬಸ್ಸುಗಳು, ಕ್ರೈಸ್ತರ, ಮುಸಲರ ಮನೆಗಳು, ಅಗ್ರಹಾರ, ಅಲ್ಲಿನ ಮಡಿಮೈಲಿಗೆ, ದೇವಸ್ಥಾನ, ದೇವರಪೂಜೆ, ಪಂಚಕಜ್ಜಾಯ, ರಣಪೂಜೆ, ಅದರ ಪ್ರಸಾದ ತಂದು ಉಪ್ಪರಿಗೆ ಮೆಟ್ಲಲ್ಲಿ ಇಡೋದರಿ, ನಾಳೆ ತಿನ್ನಬೇಕು ಅಂತ. ಬೆಳಗ್ಗೆ ಆಗೋದರೊಳಗೆ ಇರುವೆ ತುಂಬ್ಕೊಂಡು ಬಿಡೋವು. ಹಾಡಿಗೆ ಹೋಗಿ ನೇರಳೆಹಣ್ಣು ತಿಂದು ಕನ್ನಡಿಯೊಳಗೆ ನೀಲಿ ನಾಲಗೆ ನೋಡಿಕೊಂಡು ನಗತಿದ್ದೆವು. ಗೇರುಹಣ್ಣು ತಿಂತಿದ್ದೆವು. ಕಿಸ್ಕಾರ ಹಣ್ಣ ತಿಂದು ಬಾಯಿ ಕೆಂಪು ಮಾಡಕೊಳ್ತಿದ್ದೆವು. 'ಅಮ್ಮಾ, ಕಡೆಮದ್ದು ಕೊಡೇ' ಅಂತ ಅಜ್ಜಿಗೆ ಕಾಡ್ತಿದ್ದೆವು. ಲೇಖಕರಿಗೆ ನೊಸ್ಟಾಲ್ಜಿಯಾ ಭಾಳ ಇಂಪಾರ್ಟೆಂಟ್.

◆ 'ಕಡೆಮದ್ದು' ಅಂದರೇನು?

ಬಾಣಂತಿಗೆ ತಿನಸೋದರಿ. ನೂರಾರು ತರಹದ ಬೇರುತಂದು ಒಣಗಿಸಿ ಪುಡಿ ಮಾಡಿ ಸೋಸಿ, ಬೆಲ್ಲದ ಪಾಕ, ತುಪ್ಪಹಾಕಿ ಒಲೆಮೇಲೆ ಚೆನ್ನಾಗಿ ತಿರುವಿ, ಜಾಡಿತುಂಬಿ ಇಡ್ತಾರ. ಬಾಣಂತಿಗೆ ದಿನಾ ಇಷ್ಟಿಷ್ಟು ಕೊಡ್ತಾರ. ನಮ್ಮಜ್ಜಿ ಕಡೆಮದ್ದಿನ ಬೇರುಗಳ ಹೆಸರು ಹೇಳೋ ಕಾಲಕ್ಕ, 'ಹಲವು ಮಕ್ಕಳ ತಾಯಿಬೇರು' ಅಂದಿದ್ಲು. ಅದರ ಮ್ಯಾಲೆ 'ಹಲವು ಮಕ್ಕಳ ತಾಯಿಬೇರು' ಅಂತ ಕತೆ ಬರದೆ. ನಮ್ಮ ಚಿಕ್ಕ ಡೆಲಿವರಿ ಆದಾಗ ಅಜ್ಜಿ, 'ಬಾಣಂತಿಯ ಬೆನ್ನ ಗಟ್ಟಿ ಆಗಬೇಕು, ಹಡದಿಂದೆ ಗರ್ಭಕೋಶ ಲೂಸ್ ಆಗಿರ್ತತಿ, ಅದು ಗಟ್ಟಿ ಆಗಬೇಕು, ಹಾಲ್ ಬರಬೇಕು' ಅಂತ ಕಡೆಮದ್ದು ಮಾಡಿಕೊಡಾಕ ಹತ್ಯಾಳ. ಆಗ ನಾನೂ ಹೊಟ್ಟೆ ಹರಕೊಂಡು ಓವರಿ ತಕ್ಕೊಂಡಿದ್ದೆ. ಬೆನ್ನುನೋವು. ನನಗ್ಯಾಕ ಮಾಡಿಕೊಡವಲ್ಲಳು ಅಜ್ಜಿ. ಆಕಿಗೆ ಮಾಡೋಮುಂದ ನಿನಗೂ ದೊಡ್ಡಾಪರೇಶನ್ ಆಗೈತಿ, ಮಾಡ್ತೇನಿ ಅನಬೇಕಿತ್ತಲ್ಲ? ನಾಯೇನು ಹಡದ ಬಾಣಂತಿ ಅಲ್ಲಲ್ಲ ಅಂತ ಫೀಲ್ ಆಗಿತ್ತು. ಕೊನೇಗೆ ಅನಸ್ತು, ತಾಯಿ ಸತ್ತ ಮಕ್ಕಳು ಇರಬಾರದಪ್ಪಾ ಅಂತ. ಬೇಜಾರಾಗಿ ಆ ಕತೆ ಬರದೆ. ಅದಕ್ಕ ಲೆಕ್ಕ ಇಲ್ಲದಷ್ಟು ಮೆಚ್ಚುಗೆ ಬಂದವರಿ.

◆ 'ತಾಯಿ ಸತ್ತ ಮಕ್ಕಳು' ಅಷ್ಟೊಂದು ಶಾಪಗ್ರಸ್ತ ಅವಸ್ಥೆಯಾ?

ಫುಟ್‌ಬಾಲ್ ಚೆಂಡರಿ. ಅಜ್ಜಿ ತಿರುಗಾಡಕ್ಕ ಕೊಡತಿದ್ದಿಲ್ಲ, ತಾಯಿಸತ್ತ ಮಕ್ಕಳು ಅಗ್ರಹಾರಕ್ಕ ಹೋಗಬಾರದು ಅಂತ. ಹುಟ್ಟಿದೂರು ಅಂತ ಹೋದರೆ ನೆಗ್ಲೆಕ್ಟ್ ಮಾಡೋರು. ಅಪ್ಪಿತಪ್ಪಿ ಯಾರೂ ಕರೀತಿದ್ದಿಲ್ಲ. ನಾನು ಲೇಖಕಿಯಾಗೀನಲ್ಲ. ನೋಬಡಿ ಈಸ್ ಕನ್ಸರ್ನಡ್ ಅಬೌಟ್ ಮೈ ರೈಟಿಂಗ್. ಒಬ್ಬರಾರ ಪುಸ್ತಕ ಕೇಳ್ಯಾರೇನು? ಹಾದಿಬೀದೀಲಿ ಹೋಗೋರಿಗೆಲ್ಲ ಹಂಚತೀನಿ. ಅವರಿಗೆ ಕೊಟ್ಟಿಲ್ಲ. ಭಯಂಕರ ಮಟೀರಿಯಲ್ಲಿಸ್ಟ್ಸ್. ರಿಲೇಟಿವ್ಸ್‌ನಿಂದ ಅಪಮಾನ ಅನುಭವಿಸಿದೀವಿ. ಬಟ್, ಪಬ್ಲಿಕ್ ಗೇವ್ ಅಸ್ ಲಾಟ್ ಆಫ್ ಲವ್ ಅಂಡ್ ರೆಸ್ಪೆಕ್ಟ್. ನಮ್ಮ ಕೆಲಸದೋಳಿಗೆ ಹೇಳೀನಿ, 'ದವಾಖಾನಿಂದ ನನ್ನ ಡೆಡ್ ಬಾಡಿ ತಂದರ, ನಮ್ಮವರು ಬರೋಕೆ ಮುಂಚೆ ಹೆಣಚಂದ ಮಾಡಿ ಅತ್ತಬಿಡವ್ವಾ' ಅಂತ.

◆ ನಿಮ್ಮ ಕತೆಗಳಲ್ಲಿ ಕ್ರೈಸ್ತ ಪರಿಸರ ದಟ್ಟವಾಗಿದೆ.

ನಾನು ಮೂರು ವರ್ಷ ಚರ್ಚ್ ಸ್ಕೂಲಾಗೆ ಕಲ್ತೆ. ಚರ್ಚಿಗೆ ಸುಳ್ಳು ಸುಳ್ಳೇ ಹೋಗೋದು, ಕನಫೆಶನ್ ಕಿಂಡಿಗೆ ಕೈಯಿಟ್ಟು ಫಾದರ್ ಹತ್ತರ ಮಂಡಿಯೂರಿ, 'ನಾನು ಇವತ್ತು ಮಾವಿನಗಿಡದಾಗೆ ಕಾಯಿ ಕದ್ದೆ ಕ್ಷಮಿಸಿ ಫಾದರ್, ನಾನು ಇವತ್ತು ಶಾಲೇಲಿ ಪೆನ್ಸಿಲ್ ಕದ್ದೆ ನಮ್ಮನ್ನು ಕ್ಷಮಿಸಿ ಫಾದರ್' ಅಂತ ಕನಫೆಸ್ ಮಾಡತಿದ್ವಿ. ಅಜ್ಜಿ, 'ಚರ್ಚಿಗೆ ಹೋಗಿದ್ದಿರಾ' ಅಂತ ಕೋಲ್ ತಕ್ಕೊಂಡು ಗದ್ದೆ ತುಂಬ ಓಡಾಡಸ್ತಿದ್ದಳು. ನಮ್ಮನಿ ಹತ್ತರ ಹೆಲನ್‌ಬಾಯಿ ಅಂತ ಇದ್ಲು. ಆಕಿ ಮನೀಗೆ ಮ್ಯಾಲಿಂದ ಮ್ಯಾಲೆ